ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್‌ರವರ ಕೋರ್ಟಿನಲ್ಲಿ

1884ನೇ ಇಸವಿ ಅರ್ಜೀ ನಂಬರ್ 34.

ಮೃತಪಟ್ಟ ನರಸುಹ್ಮಯ್ಯ ಮತ್ತು ಗಂಗಮ್ಮನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ರಂಗನು, ಮೃತಪಟ್ಟ ಸದರೀ ನರಸುಹ್ಮಯ್ಯ, ಗಂಗಮ್ಮನಿಗೆ ದತ್ತು ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಚಿಕ್ಕನಾಯಕನಹಳ್ಳಿ ಸ್ಥಳದ ಗೊಲ್ಲರ ನರಸುಹ್ಮಯ್ಯನ ಮಗ ಗಂಗನು, ಡಿಟೋ ವಾಸಸ್ಥರಾಗಿ ಮೃತಪಟ್ಟ ನರಸುಹ್ಮಯ್ಯ, ಗಂಗಮ್ಮನ ಜಿಂದಗೀ ಬಗ್ಯಾಗಿ ಬರತಕ್ಕ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರನಾದ ರಂಗನ ಅರ್ಜೀಯನ್ನು 1884ನೇ ಇಸವೀ ಜುಲೈ ತಿಂಗಳು ತಾರೀಖು 3ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನರಸುಹ್ಮಯ್ಯ, ಗಂಗಮ್ಮ ಆಸ್ತಿಗೆ ಹಕ್ಕುದಾರರಾದ ವಿಶಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಜೂ೯ ತಿಂಗಳು 5ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಅರ್ಜೀ ನಂಬರ್ 39.

ಮೃತಪಟ್ಟ ನಾಗೂಸಾನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ವೆಂಕೂಸಾ, ಮೃತಪಟ್ಟ ಸದರೀ ಖತೀ ಕುಬಾಡಿ ನಾಗೂಸಾಗೆ ಮಗನು ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ತೆಲಗರಪೇಟೇಲಿರುವ ವೆಂಕೂಸಾ ಯೆಂಬವನು, ಡಿಟೋ ವಾಸಸ್ಥನಾಗಿ ಮೃತಪಟ್ಟ ನಾಗೂಸಾನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾನೆ.

ಸದರೀ ದರಖಾಸ್ತುದಾರನಾದ ವೆಂಕೂಸಾ ಅರ್ಜಿಯನ್ನು 1884ನೇ ಇಸವಿ ಜೂ೯ ತಿಂಗಳು ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಾಗೂಸಾನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಜೂ೯ ತಿಂಗಳು 2ನೇ ತಾರೀಖಿಲ್ಲಿನ ಈ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕೈಸ್,
ಸಬ್ ಜಡ್ಜ್.

ತುಮಕೂರು ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರವರ ಕೋರ್ಟಿನಿಂದ.

ತಾರೀಖು 6ನೇ ಜೂ೯ 1884.

ಇದರಿಂದ ಸಮಸ್ತರಿಗೂ ತಿಳಿಯಪಡಿಸುವದೇನಂದರೆ, ಡಿಸ್ಟ್ರಿಕ್ಟ್ ಮಜಕೂರ್ ಮೆದ್ದಗಿರಿ, ಪಾವಗಡ, ಪೆರಾ, ಗುಬ್ಬಿ ಈ ತಾಲ್ಲೂಕುಗಳಲ್ಲಿ 1884-85ನೇ ತಾರಣಸಂವತ್ಸರದಲ್ಲಿ ಸರ್ಕಾರದ ಜಮೀನಿನಲ್ಲಿ ಕುರಂಗದ ಕಲ್ಲುಗಳನ್ನು ಜಮೀಯಿಸತಕ್ಕ ಹಕ್ಕನ್ನು ಆಯಾಯ ತಾಲ್ಲೂಕು ಆಮೀಲರ ರೂಬರೂ ತಾಲ್ಲೂಕು ಕಚ್ಚೇರಿಯಲ್ಲಿ ಇದರಡಿಲಿ ಕಂಡ ತಾರೀಖುಗಳಲ್ಲಿ ದಿವಿ 11 ಘಂಟೆ ಲುಗಾಯತು ಹರಾಜು ಮಾಡಲಾಧೀತು.

ಷರತ್ತುಗಳು.

1. ಹರಾಜು ಕೈದಾದಕೂಡ್ಲೆ ಆಖೈರ್ ಸವಾಲ್ದಾರನು ಕೇವಡಾ 25 ರೂಪಾಯಿ ಮೇರಿಗೆ ನಗದು ಬೇವಣಿಯನ್ನು ಇಡಬೇಕು, ಹರಾಜು ದೀರ್ವಾ ಸಾಹೆಬರಿಂದ ಮಂಜೂರಾದ ಪಜನೆ 15 ದಿವಸದಲ್ಲಿ ಪೂರಾ ಮೊಬಲಗನ್ನು ಹಾಜರ್ಮಾಡಬೇಕು, ಹಾಗೆ ಮಾಡದೆ ತಪ್ಪಿದರೆ ಪುನಹಾ ಹರಾಜು ಮಾಡಲ್ಪಟ್ಟು ನಷ್ಟ ಬಂದ ಮೊಬಲಗಿಗೆ ಮೊದಲಿನ ಚಡ ಸವಾಲ್ದಾರನನ್ನು ಗುರಿಮಾಡಲಾಧೀತು, ಮತ್ತು ಬೇವಣಿಯನ್ನು ಸರ್ಕಾರಕ್ಕೆ ಕೇರಿಗೆ ಕೊಳ್ಳಲಾಧೀತು.

ಹರ